RW-1 ದರ್ಶನ್

Date:11.12.2025

**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ಶ್ರೀ ಜಿ ಎಸ್ ಪರ ವಕೀಲರಿಂದಃ</u>**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಸಾಕ್ಷಿಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಆರ್ 1 ಎಂದು ಗುರುತಿಸಲಾಯಿತು. ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್ 2 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ಓ ಹೆಚ್ ಜೆ ವಕೀಲರಿಂದಃ</u>**

ಅಪಘಾತಕ್ಕೆ ಸಂಬಂದಿಸಿದ ದಾಖಲಾತಿಗಳನ್ನು ನಾನು ನೋಡಿರುತ್ತೇನೆ. ಈ ಪ್ರಕರಣದಲ್ಲಿ ಪೊಲೀಸರು ತನಿಖೆ ಮಾಡಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದರೆ ಸರಿ. ಕೆಎ-16-ಬಿ-5564 ವಾಹನ ಅಪಘಾತವಾದ ದಿವಸ ನಮ್ಮ ಕಂಪನಿಯ ವಿಮೆಗೆ ಒಳಪಟ್ಟಿತ್ತು ಎಂದರೆ ಸರಿ. ಆ ಕಾರಣ ಪರಿಹಾರದ ಹಣವನ್ನು ಕೊಡುವ ಬಾಧ್ಯಸ್ತಿಕೆ ನಮ್ಮ ಕಂಪನಿ ಹೊಂದಿದೆ ಎಂದರೆ ಸರಿಯಲ್ಲ. ವಾಹನ ಚಾಲಕನಿಗೆ ವಾಹನವನ್ನು ಚಾಲನೆ ಮಾಡಲು ಚಾಲನಾ ಪರವಾನಿಗೆ ಪತ್ರ ಇತ್ತು ಎಂದರೆ ಸರಿ.

**<u>ಪಾಟೀ ಸವಾಲು 1 ನೇ ಎದುರುದಾರರ ಪರ ವಕೀಲರಿಂದ</u>**

ಅರ್ಜಿದಾರರು ಮಾಡಿದ ಪಾಟೀ ಸವಾಲನ್ನೆ ಅಳವಡಿಸಿಕೊಳ್ಳಲು ತಿಳಿಸಿರುತ್ತಾರೆ

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ